ಕರ್ನಾಟಕ ಸರ್ಕಾರ
ಕೃಷಿ ಇಲಾಖೆ

ಸಂ.ಬೆಸವಿ/ಸುತ್ತೋಲೆ - ಪವ್ಯ/2021-22

ಕೃಷಿ ಆಯುಕ್ತಾಲಯ
ಶೇಷಾದ್ರಿ ರಸ್ತೆ, ಬೆಂಗಳೂರು-01
ದಿನಾಂಕ:20-05-2021

ಸುತ್ತೋಲೆ-1

ವಿಷಯ: 2021-22ನೇ ಸಾಲಿನ ಪೂರ್ವ ಮುಂಗಾರು ಮತ್ತು ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಕೈಗೊಳ್ಳಬೇಕಾದ ಪೂರ್ವ ತಯಾರಿ ಕ್ರಮಗಳ ಕುರಿತು.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ ಕೃಇ/83/ಕೃಕೈಉ/2020/, ದಿ.07-08-2020, ಬೆಂಗಳೂರು.
2. ಸರ್ಕಾರದ ಆದೇಶ ಸಂಖ್ಯೆ: AGRI-AML-108/2021 Bengaluru, Dtd: 17.04.2021.
3. ದಿನಾಂಕ:30-04-2021ರಂದು ಮಾನ್ಯ ಕೃಷಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಗೂಗಲ್ ವಿಡೀಯೋ ಸಂವಾದದಲ್ಲಿ ನಿರ್ಧರಿಸಿದಂತೆ.

- - -

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, 2020-21ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಯೋಜನೆಯನ್ನು ಸಿಆಸುಇ (ಇ-ಆಡಳಿತ) ರವರು ಅಭಿವೃದ್ಧಿ ಪಡಿಸಿರುವ ಮಾರ್ಪಡಿಸಿದ ರೈತರ ಮೊಬೈಲ್ ಆಪ್ ಬಳಸಿಕೊಂಡು ಅನುಷ್ಠಾನಗೊಳಿಸಲು ಉಲ್ಲೇಖ-01 ರಲ್ಲಿ ಹಾಗೂ 2021-22 ನೇ ಸಾಲಿನಲ್ಲಿ ಮುಂದುವರೆಸಲು ಉಲ್ಲೇಖ-02 ರಲ್ಲಿ ಸರ್ಕಾರಿ ಆದೇಶ ಹೊರಡಿಸಲಾಗಿದ್ದು, ಉಲ್ಲೇಖ-03 ರಲ್ಲಿ ಪೂರ್ವ ಮುಂಗಾರು ಹಾಗೂ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆಯನ್ನು ಸಕಾಲದಲ್ಲಿ ಪ್ರಾರಂಭಿಸುವ ನಿಟ್ಟಿನಲ್ಲಿ ಪ್ರಸ್ತುತ ಇರುವ ಕೋವಿಡ್-19 ಮಾರ್ಗಸೂಚಿಗಳನ್ವಯ ಜಿಲ್ಲಾ ಮಟ್ಟದಲ್ಲಿ ಈ ಕೆಳಕಂಡ ಅಗತ್ಯ ಕ್ರಮ ಕೈಗೊಳ್ಳಲು ನಿರ್ಧರಿಸಲಾಯಿತು ಹಾಗೂ ಅದರಂತೆ ಸೂಕ್ತ ಕ್ರಮ ಕೈಗೊಳ್ಳುವುದು.

1. 2021-22ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಯೋಜನೆಯನ್ನು ಪರಿಣಾಮಕಾರಿ ಮತ್ತು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಪ್ರಸ್ತುತ ಇರುವ ಕೋವಿಡ್-19 ಮಾರ್ಗಸೂಚಿಗಳನ್ವಯ ಹೆಚ್ಚಿನ ಪ್ರಚಾರಕ್ಕಾಗಿ ಈ ಕೆಳಗಿನ ಕ್ರಮಗಳನ್ನು ಕಡ್ಡಾಯವಾಗಿ ಕೈಗೊಳ್ಳುವುದು.

1ಎ. ರೈತರು ತಮ್ಮ ಕ್ಷೇತ್ರಗಳಲ್ಲಿ ಬೆಳೆದಿರುವ ಬೆಳೆಗಳ ವಿವರಗಳನ್ನು ರೈತರೇ ಸ್ವತಃ "ರೈತ ಬೆಳೆ ಸಮೀಕ್ಷೆ" ಆಪ್ ಮೂಲಕ ನಮೂದಿಸಲು ಹೆಚ್ಚಿನ ಅರಿವನ್ನು ಮೂಡಿಸುವ ಸಲುವಾಗಿ ಜಿಲ್ಲಾ /ತಾಲ್ಲೂಕು / ಹೋಬಳಿ/ ಗ್ರಾಮ ಮಟ್ಟದಲ್ಲಿ ನಿರಂತರವಾಗಿ ಪ್ರಚಾರ ಸಭೆಗಳನ್ನು ನಡೆಸುವುದು.

1ಬಿ. ಪತ್ರಿಕಾ ಮತ್ತು ದೃಶ್ಯ ಮಾಧ್ಯಮಗಳ ಮೂಲಕ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಪ್ರಚಾರ ನೀಡುವುದು.

1ಸಿ. ಪ್ರಚಾರಕ್ಕೆ ಸಂಬಂಧಪಟ್ಟಂತೆ ಕರಪತ್ರಗಳು, ಪೋಸ್ಟರ್ ಗಳು ಮತ್ತು ಬ್ಯಾನರ್ ಳನ್ನು ಸಾಕಷ್ಟು ಸಂಖ್ಯೆಯಲ್ಲಿ ಮುದ್ರಿಸಿ ರೈತ ಸಂಪರ್ಕ ಕೇಂದ್ರ, ಹಾಲು ಉತ್ಪಾದಕ ಸಹಕಾರ ಸಂಘ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಗ್ರಾಮ ಪಂಚಾಯತಿ, ನಾಡಕಛೇರಿ ಮತ್ತು ಹೆಚ್ಚಿನ ಜನಸಂದಣಿ ಇರುವ ಇತರೆ ಸಾರ್ವಜನಿಕ ಸ್ಥಳಗಳಲ್ಲಿ ಪ್ರದರ್ಶಿಸಲು ಕ್ರಮ ಕೈಗೊಳ್ಳುವುದು.

2. ಸಕಾಲದಲ್ಲಿ ಮಾರ್ಗಸೂಚಿಗಳನ್ವಯ ಸ್ಥಳೀಯ ಖಾಸಗಿ ನಿವಾಸಿಗಳನ್ನು ನೇಮಿಸುವುದು.

3. ಆಯ್ಕೆಯಾದ ಖಾಸಗಿ ನಿವಾಸಿಗಳಿಗೆ ತಾಲ್ಲೂಕು ಮಾಸ್ಟರ್ ಟ್ರೇನರ್ ಗಳಿಂದ ಮತ್ತು ಜಿಲ್ಲಾ ತಾಂತ್ರಿಕ ಸಲಹೆಗಾರರಿಂದ ಬೆಳೆ ಸಮೀಕ್ಷೆಯ ಬಗ್ಗೆ ಸೂಕ್ತ ತರಭೇತಿಯನ್ನು ನೀಡಲು ಕ್ರಮವಹಿಸುವುದು.

4. ಕ್ಷೇತ್ರ ಮಟ್ಟದಲ್ಲಿ ಬೆಳೆ ಸಮೀಕ್ಷೆ ನಡೆಸುವಾಗ ಕೆಲವೊಂದು ಸಂದರ್ಭಗಳಲ್ಲಿ ಸರ್ವೆ / ಹಿಸ್ಸಾ ನಂಬರ್ ಗಳು ಗೋಚರಿಸದೇ ಬೆಳೆ ಸಮೀಕ್ಷೆ ಕಾರ್ಯಕ್ಕೆ ಅಡಚಣೆ ಉಂಟಾಗುತ್ತದೆ. ಅಂತಹ ಸಂದರ್ಭಗಳಲ್ಲಿ ಸರ್ವೆ / ಹಿಸ್ಸಾ ನಂಬರ್ ಗಳನ್ನು ನಿಖರವಾಗಿ ಗುರುತಿಸಲು ಸಹಾಯಕ್ಕಾಗಿ ದಿಶಾಂಕ್ ಆಪ್ ಅನ್ನು ಕಡ್ಡಾಯವಾಗಿ ಬಳಸುವಂತೆ ಖಾಸಗಿ ನಿವಾಸಿಗಳು / ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡುವುದು. ಕ್ಷೇತ್ರ ಮಟ್ಟದಲ್ಲಿ ರೈತರ ಪರವಾಗಿ ಬೆಳೆ ಸಮೀಕ್ಷೆ ನಡೆಸಿ ವಿವರಗಳನ್ನು ಅಪ್‌ಲೋಡ್ ಮಾಡುವ ಸಂದರ್ಭಗಳಲ್ಲಿ ರೈತರ ಮೊಬೈಲ್ ಸಂಖ್ಯೆ ನಮೂದಿಸಿ, ಛಾಯಾಚಿತ್ರಗಳಲ್ಲಿ ಸ್ವತ: ರೈತರು ಅಥವಾ ಅವರ ಕುಟುಂಬದವರು ಕಡ್ಡಾಯವಾಗಿ ಇರುವುದನ್ನು ಖಚಿತಪಡಿಸಿಕೊಳ್ಳುವುದು.

5. ಆದಷ್ಟು ಖಾಸಗಿ ನಿವಾಸಿಗಳು/ಅಧಿಕಾರಿಗಳು ಸಾಧ್ಯವಾದ ಮಟ್ಟಿಗೆ ರೈತ ಕುಟುಂಬದಲ್ಲಿ ಆನ್ಡ್ರಾಯ್ಡ್ ಮೊಬೈಲ್ ಹೊಂದಿರುವ ಯುವಕರಿಗೆ ಬೆಳೆ ಸಮೀಕ್ಷೆ ಆಪ್ ಕುರಿತು ಸೂಕ್ತ ತರಬೇತಿ ಮತ್ತು ಪ್ರಚಾರ ನೀಡಿದ ಪಕ್ಷದಲ್ಲಿ ತರಬೇತಿ ಪಡೆದಂತಹ ಯುವಕರು ತಮ್ಮ ತಾಕುಗಳನ್ನು ಸಮೀಕ್ಷೆ ಮಾಡುವುದಲ್ಲದೆ ತಮ್ಮ ನೆಂಟರು ಹಾಗೂ ಸ್ನೇಹಿತರ ತಾಕುಗಳನ್ನು ಸಹ ಸಮೀಕ್ಷೆ ಮಾಡಲು ಮುಂದಾಗುವುದರಿಂದ ಈ ಕುರಿತು ಸೂಕ್ತ ಕ್ರಮವಹಿಸುವುದು.

ಮುಂದುವರೆದು, ಪ್ರಸ್ತುತ ಇರುವ ಕೋವಿಡ್-19 ಮಾರ್ಗಸೂಚಿಗಳನ್ನು ಪಾಲಿಸಿ ಇಲಾಖೆಯಲ್ಲಿ ನಿಯಮಿತವಾಗಿ ನಡೆಯುವ ಕಾರ್ಯಕ್ರಮಗಳಲ್ಲಿ, ಜನಪ್ರತಿನಿದಿಗಳ ಕೆಲ ಭೇಟಿ ಹಾಗೂ ಭಾಷಣಗಳಲ್ಲಿ ಬೆಳೆ ಸಮೀಕ್ಷೆ ಹಾಗೂ ಬೆಳೆ ಸಮೀಕ್ಷೆಯ ವಿವರಗಳನ್ನು ಪಹಣಿಗಳಲ್ಲಿ ಇಂಧೀಕರಿಸುತ್ತಿರುವ/ಸಮೀಕರಿಸುತ್ತಿರುವ ಮಹತ್ವದ ಕುರಿತು ವಿಷಯವನ್ನು ಪ್ರಸ್ತಾಪಿಸುವಂತೆ ಕ್ರಮ ಕೈಗೊಳ್ಳುವುದು. ಮುಂದುವರೆದು, ತಮ್ಮ ಜಿಲ್ಲೆಗಳ ಸಚಿವರು, ಶಾಸಕರು ಹಾಗೂ ಎಲ್ಲಾ ಜನಪ್ರತಿನಿಧಿಗಳನ್ನೊಳಗೊಂಡು ಬೆಳೆ ಸಮೀಕ್ಷೆ ಪ್ರಾತ್ಯಕ್ಷತೆಯನ್ನು ಕ್ಷೇತ್ರ ಮಟ್ಟದಲ್ಲಿ ಆಯೋಜಿಸಿ ಬೆಳೆ ಸಮೀಕ್ಷೆ ಯೋಜನೆಯ ಹಾಗೂ ಮೇಲೆ ತಿಳಿಸಿರುವ ವಿಷಯಗಳ ಕುರಿತು ರೈತರಲ್ಲಿ ಹೆಚ್ಚಿನ ಪ್ರಚಾರ ಕೈಗೊಂಡು ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲು ಈ ಮೂಲಕ ತಿಳಿಸಿದೆ ಹಾಗೂ ತಗಲುವ ವೆಚ್ಚಗಳನ್ನು ಬೆಳೆ ಸಮೀಕ್ಷೆಯ ಪ್ರಚಾರ ಘಟಕದಡಿ ಲಭ್ಯವಿರುವ ಅನುಧಾನವನ್ನು ಬಳಸಿಕೊಂಡು ಹೆಚ್ಚಿನ ಪ್ರಚಾರ ಕೈಗೊಳ್ಳಲು ಸೂಚಿಸಿದೆ.

21/05/21.

ಕೃಷಿ ಆಯುಕ್ತರು

ಪ್ರತಿಯನ್ನು ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಮಾಹಿತಿಗಾಗಿ ಕಳುಹಿಸಿದೆ.
ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರಿಗೆ ಕಳುಹಿಸುತ್ತಾ ಸದರಿ ಸುತ್ತೋಲೆಯನ್ನು ವಿಭಾಗ, ತಾಲ್ಲೂಕು & ಹೋಬಳಿ ಮಟ್ಟಕ್ಕೆ ತಲುಪಿಸುವಂತೆ ಸೂಚಿಸಿ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.